ಶನಿವಾರ 13–09–2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01–ಸಂಚಿಕೆ 45

Digital Varthe Kannada Daily Volume 01 - Issue 45 Saturday 12-09-2025 Price: 5/- Rs 2 Pages Bengalore

DIGITAL VARTHE

www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

RNI:KNKAN/25/A1348

ಕನ್ನಡ ದಿನಪತ್ರಿಕೆ



ಬೈರೇಗೌಡನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘ ನಿ ವತಿಯಿಂದ ದಿನಾಂಕ 14.09.2025 ನೇ ಭಾನುವಾರ ನಡೆಯುವ ಸರ್ವ ಸದಸ್ಯರ ವಾರ್ಷಿಕ ಸಾಮಾನ್ಯ ಸಭೆಗೆ ಮುಖ್ಯಅಥಿತಿಗಳಾಗಿ ಬೆಂಗಳೂರು ಸಹಕಾರ ಹಾಲು ಒಕ್ಕೂಟದ ನಿರ್ದೇಶಕರಾದಂತ ಸನ್ಮಾನ್ಯ ಶ್ರೀ ಸತೀಶ್ ಕಡತನಮಲೆ ರವರನ್ನು ಸಭೆಗೆ ಆಹ್ವಾನಿಸಲಾಯಿತು.

## ಚಲಿಸುತ್ತಿದ್ದಾಗಲೇ ಹೊತ್ತಿ ಉರಿದ ಕಾರು




ಬೆಂಗಳೂರು: ಚಲಿಸುತ್ತಿದ್ದ ಕಾರಿನಲ್ಲಿ ಬೆಂಕಿ ಹತ್ತಿಕೊಂಡಿದ್ದು ಸಾಫ್ಟ್ ವೇರ್ ಎಂಜಿನಿಯರ್ ಹಾಗೂ ಚಾಲಕ ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ಹೈಗ್ರೌಂಡ್ಸ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇಂದು ಬೆಳಗ್ಗೆ ನಡೆದಿದೆ. ಸಚಿನ್ ಎಂಬುವವರು ಕಾರಿನಲ್ಲಿ ಕೋರಮಂಗಲದಿಂದ ಗಂಗಾನಗರದಲ್ಲಿರುವ ಸಬ್‌ರಿಜಿಸ್ಟ್ರರ್ ಕಚೇರಿಗೆ ಆಸ್ತಿ ನೋಂದಣಿಗಾಗಿ ಬೆಳಗ್ಗೆ ತೆರಳುತ್ತಿದ್ದರು.

ಸುಮಾರು 11.30ರ ಸಂದರ್ಭದಲ್ಲಿ ಸಿಎಂ ಮನೆ ಸಮೀಪದ ಅರಮನೆ ರಸ್ತೆಯ ವಿಲ್ಸನ್ ಮ್ಯಾನರ್ ಸೇತುವೆಯ ಸರ್ವೀಸ್ ರಸ್ತೆಯಲ್ಲಿ ಕಾರಿನ ಮುಂಭಾಗದ ಎಂಜಿನ್‌ನಲ್ಲಿ ಹೊಗೆ ಕಾಣಿಸಿಕೊಂಡಿದೆ. ತಕ್ಷಣ ಚಾಲಕ ಅಪಾಯ ಅರಿತು ಕಾರನ್ನು ರಸ್ತೆ ಬದಿ ನಿಲ್ಲಿಸಿದ್ದಾರೆ. ಸಚಿನ್ ಕೂಡ ಕಾರಿನಿಂದ ಹೊರಗೆ ಇಳಿದು ಕೂದಲೆಳೆಯ ಅಂತರದಲ್ಲಿ ಪಾರಾಗಿದ್ದಾರೆ. ಚಾಲಕ ಕಾರಿನ ಮುಂದಿನ ಬಾನೆಟ್ ತೆಗೆಯುತ್ತಿದ್ದಂತೆಯೇ ಬೆಂಕಿ ಆವರಿಸಿದ್ದರಿಂದ ಅವರು ಹಿಂದೆ ಸರಿದಿದ್ದಾರೆ. ಸಚಿನ್ ಅವರು ಎಚ್ಚೆತ್ತುಕೊಂಡು ತಮ ಬಳಿ ಇದ್ದ ದಾಖಲೆ ಮತ್ತು ಕೆಲ ವಸ್ತುಗಳನ್ನು ಕಾರಿನಿಂದ ಹೊರಗೆ ತೆಗೆದುಕೊಂಡಿದ್ದಾರೆ.

ನೋಡ ನೋಡುತ್ತಿದ್ದಂತೆ ಕಾರು ಸಂಪೂರ್ಣ ಹೊತ್ತಿ ಉರಿದಿದೆ. ಸುದ್ದಿ ತಿಳಿದು ಸ್ಥಳಕ್ಕೆ ದಾವಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿಂ–ಯನ್ನು ನಂದಿಸಿದ್ದಾರೆ. ಅಷ್ಟೊತ್ತಿಗೆ ಕಾರು ಶೇ. 75ರಷ್ಟು ಭಾಗ ಸುಟ್ಟು ಕರಕಲಾಗಿದೆ.

## ಪೊತೀಸ್ ಬಟ್ಟೆ ಅಂಗಡಿಗಳ ಮೇಲೆ ಐಟಿ ದಾಳಿ




ಬೆಂಗಳೂರು: ಕೋಟ್ಯಂತರ ರೂ. ವಂಚನೆ ಮಾಡಿದ ಆರೋಪದ ಹಿನ್ನೆಲೆಯಲ್ಲಿ ತಮಿಳುನಾಡು ಮೂಲದ ಪೊತೀಸ್ ಬಟ್ಟೆ ಅಂಗಡಿಗಳ ಮೇಲೆ ಆದಾಯ ತೆರಿಗೆ ಇಲಾಖೆ(ಐಟಿ)ಯ ಅಧಿಕಾರಿಗಳು ದಿಢೀರ್ ದಾಳಿ ನಡೆಸಿದ್ದಾರೆ.

ಚೆನ್ನೈನಿಂದ ಆಗಮಿಸಿದ್ದ 30ಕ್ಕೂ ಹೆಚ್ಚು ಐಟಿ ಅಧಿಕಾರಿಗಳು ಬೆಳಗ್ಗೆಯೇ ನಗರದ ಕೆ.ಜಿ.ರಸ್ತೆಯಲ್ಲಿರುವ ಪೊತೀಸ್ ಸೇರಿದಂತೆ ಹಲವು ಬಟ್ಟೆ ಮಳಿಗೆಗಳ ಮೇಲೆ ದಾಳಿ ನಡೆಸಿ ತೆರಿಗೆ ವಂಚನೆ ಪ್ರಕರಣ ಸಂಬಂಧ ದಾಖಲೆಗಳನ್ನು ವಶಕ್ಕೆ ತೆಗೆದುಕೊಂಡಿದ್ದಾರೆ. ಕೆಲವು ಬಟ್ಟೆ ಮಳಿಗೆಗಳು ಇನ್ನು ಬಾಗಿಲು ತೆರೆದಿರಲಿಲ್ಲ. ಐಟಿ ಅಧಿಕಾರಿಗಳು ದೂರವಾಣಿ ಮೂಲಕ ಮಾಹಿತಿ ನೀಡಿ ಬಲವಂತವಾಗಿ ಬೀಗ ತೆರೆಸಿ ಪರಿಶೀಲನೆ ನಡೆಸಿದ್ದಾರೆ. ಮೈಸೂರುರಸ್ತೆಯ ಟೆಂಬರ್ ಲೇಔಟ್, ಗಾಂಧಿನಗರದ ಅತೀ ದೊಡ್ಡ ಶೋ ರೂಮ್ ಮೇಲೆ ಐಟಿ ದಾಳಿಯಾಗಿದೆ. 30ಕ್ಕೂ ಹೆಚ್ಚು ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

ಪ್ರತ್ಯೇಕ ತಂಡವಾಗಿ ಪೊತೀಸ್ ಮಳಿಗೆ ಮೇಲೆ ದಾಳಿ ನಡೆಸಲಾಗಿದೆ. ಆದಾಯ ತೆರಿಗೆ ವಂಚನೆ ಹಿನ್ನಲೆಯಲ್ಲಿ ದಾಳಿ ನಡೆದಿದೆ ಎನ್ನಲಾಗಿದೆ. ಚೆನ್ನೈಯಿಂದ ಬೆಂಗಳೂರಿಗೆ ಬಂದ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಇನ್ನು ಟೆಂಬರ್ ಲೇಔಟ್‌ನಲ್ಲಿರುವ ಪೊತೀಸ್ ಮಳಿಗೆ ಮೇಲೆ 25ಕ್ಕೂ ಹೆಚ್ಚು ಅಧಿಕಾರಿಗಳ ತಂಡ ದಾಳಿ ನಡೆಸಿದ್ದು, ನಗದು ವಹಿವಾಟು, ಆನ್ಲೈನ್ ವಹಿವಾಟು, ಮಳಿಗೆಯಲ್ಲಿರುವ ಬಟ್ಟೆಗಳು, ಮೌಲ್ಯ ಸೇರಿದಂತೆ ಮಳಿಗೆಯಲ್ಲಿನ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿದ್ದಾರೆ. ಈ ಪೊತೀಸ್ ಮಳಿಗೆಗಳು ಚೆನ್ನೈ ಉದ್ಯಮಿಗೆ ಸೇರಿದ ಮಳಿಗೆಗಳಾಗಿವೆ. ರೇಷ್ಮೆ ಸೀರೆಗಳನ್ನು ಮಾತ್ರ ಮಾರಾಟ ಮಾಡುತ್ತಿದ್ದರು. ಆದ–'ರೆ ಇಂದು ಎಲ್ಲಾ ರೀತಿಯ ಉಡುಪುಗಳನ್ನು ಮಾರಾಟ ಮಾಡಲಾಗುತ್ತದೆ. ಚೆನ್ನೈನಲ್ಲಿರುವ ಪ್ರಮುಖ ಅಂಗಡಿಯನ್ನು ಪೊತೀಸ್ ಪ್ಯಾಲೇಸ್ ಎಂದು ಕರೆಯಲಾಗುತ್ತದೆ. ಕೆಲವೇ ವರ್ಷಗಳಲ್ಲಿ ದೊಡ್ಡ ಮಟ್ಟದಲ್ಲಿ ಬೆಳೆದಿದ್ದ ಪೊತೀಸ್ ಬಟ್ಟೆ ಮಳಿಗೆಯ ಶೋ ರೂಮ್‌ಗಳು ಬೆಂಗಳೂರು, ತಮಿಳುನಾಡು ಸೇರಿದಂತೆ ಹಲವು ಕಡೆ ಇವೆ.

## 3 ತಿಂಗಳಲ್ಲಿ ಹಿಂದೂ ವಿರೋಧಿ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ :ಯತ್ನಾಳ್ ಭವಿಷ್ಯ



ಮೈಸೂರು, ಸೆ.12– ಹಿಂದೂಗಳ ಧರ್ಮಾಚರಣೆಗೆ ಅಡ್ಡಿ ಪಡಿಸುತ್ತಿರುವ ಸಿದ್ದರಾಮಯ್ಯ ಅವರ ಸರ್ಕಾರ ಮುಂದಿನ 3 ತಿಂಗಳಲ್ಲೇ ಪತನವಾಗಲಿದೆ ಎಂದು ಬಿಜೆಪಿ ಉಚ್ಛಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಭವಿಷ್ಯ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಣಪತಿ ವಿಸರ್ಜನೆ ಹಾಗೂ ಇತರೆ ಸಂದರ್ಭಗಳಲ್ಲಿ ಮಸೀದಿಗಳಿಂದ ಕಲ್ಲು ತೂರಾಟ ನಡೆಸಿರುವುದು, ಹಲವು ಕಡೆ ಪಾಕಿಸ್ತಾನದ ಧ್ವಜರೋಹಣ, ಪಾಕಿಸ್ತಾನದ ಪರ ಘೋಷಣೆ ಸೇ–ರಿದಂತೆ ಅನೇಕ ದೇಶ ವಿರೋಧಿ ಚಟುವಟಿಕೆಗಳು ನಡೆಯುತ್ತಿವೆ. ಹಿಂದೂ ವಿರೋಧಿ ಧೋರಣೆಯನ್ನು ಬದಲಾಯಿಸಿಕೊಳ್ಳದಿದ್ದರೆ 2028ಕ್ಕೂ ಮುಂಚೆಯೆ ಸಿದ್ದರಾಮಯ್ಯ ಅಧಿಕಾರ ಕಳೆದುಕೊಳ್ಳುತ್ತಾರೆ ಎಂದು ಹೇಳಿದರು.

ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಗಣೇಶೋತ್ಸವದ ಮೇಲೆ ಕಲ್ಲು ತೂರಿದ ಪ್ರಕರಣದ ವಿರುದ್ಧ ಪ್ರತಿಭಟನೆಗಳಾದಾಗ ಬಿಜೆಪಿ ನಾಯಕರ ಎದುರು ಕಾರ್ಯಕರ್ತರು ಯತ್ನಾಳ್ ಸ್ಥಳಕ್ಕೆ ಬರಬೇಕೆಂದು ಆಗ್ರಹಿಸಿದ್ದರು. ಅದರಂತೆ ನಾನು ಅಲ್ಲಿಗೆ ಹೋಗಿದ್ದೆ. ಇಂದು ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ರಾಜ್ಯದಲ್ಲಿ ಭ್ರಷ್ಟ ಸರ್ಕಾರ ತೊಲಗಬೇಕು, ಹೊಂದಾಣಿಕೆಯ ರಾಜಕಾರಣ ಕೊನೆಯಾಗಬೇಕು ಎಂದು ದೇವರಲ್ಲಿ ಪ್ರಾರ್ಥಿಸುವುದಾಗಿ ಹೇಳಿದರು. ಗಣೇಶ ವಿಸರ್ಜನಾ ಸಂದರ್ಭದಲ್ಲಿ ಕಲ್ಲು ತೂರಾಟ ನಡೆಸಲು ಆಶ್ರಯ ನೀಡಿರುವ ಅಕ್ರಮ ಮಸೀದಿಗಳನ್ನು ನೆಲ ಸಮಗೊಳಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆಯುತ್ತೇನೆ. ಒಂದು ವೇಳೆ ಕ್ರಮ ತೆಗೆದುಕೊಳ್ಳದೇ ಹೋದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಹೇಳಿದರು.

ಇದೇ ಧೋರಣೆ ಮುಂದುವರೆದರೆ, ರಾಜ್ಯದಲ್ಲಿ ನೇಪಾಳದ ಮಾದರಿಯಲ್ಲಿ ಕ್ರಾಂತಿಯಾಗುತ್ತದೆ. ರಾಜ್ಯದಲ್ಲಿ ಮಸೀದಿಗಳನ್ನು ಪರಿಶೀಲನೆಗೊಳಪಡಿಸಬೇಕು. ಕಲ್ಲು ತೂರಾಟಕ್ಕೆ ಮುಂಚಿತವಾಗಿಯೇ ಮಸೀದಿಗಳಲ್ಲಿ ಕಲ್ಲುಗಳನ್ನು ಸಂಗ್ರಹಿಸಲಾಗಿದೆ. ಇದಕ್ಕೆ ಅವಕಾಶ ನೀಡಿದ ಬಗ್ಗೆ ತನಿಖೆಯಾಗಬೇಕು ಹಾಗೂ ಮಸೀದಿಗಳನ್ನು ತಪಾಸಣೆಗೊಳಪಡಿಸಬೇಕು ಎಂದರು. ಕಾಂಗ್ರೆಸ್ ಸರ್ಕಾರ ತಮಗೆ ಮುಸ್ಲಿಮರು ಮಾತ್ರ ಮತ ಹಾಕಿದ್ದಾರೆ ಎಂಬಂತೆ ವರ್ತಿಸುತ್ತಿದೆ. ಹಿಂದೂ ವಿರೋಧಿ ನಿಲುವುಗಳನ್ನು ಪಾಲಿಸುತ್ತಿದೆ. ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್‌ರನ್ನು ಅಹ್ವಾನಿಸುವ ಸಿದ್ದರಾಮಯ್ಯ ಅವರಿಗೆ ಚಾಮುಂಡಿ ದೇವಿಯ ಶಾಪ ತಟ್ಟಲಿದೆ ಎಂದು ಹೇಳಿದರು. ರಾಜ್ಯದಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿದೆ. ಸಾವಿರಾರು ಕೋಟಿ ಲೂಟಿಯಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನಿಗಮಗಳ ಹಣವನ್ನು ದೋಚಲಾಗಿದೆ. ಭ್ರಷ್ಟ ಸರ್ಕಾರದ ಜೊತೆ ಬಿಜೆಪಿ ನಾಯಕರು ಕೈ ಜೋಡಿಸಿದ್ದಾರೆ. ಯಡಿಯೂರಪ್ಪ ಅವರ ವಿರುದ್ಧವೂ ಸಾಕಷ್ಟು ಭ್ರಷ್ಟಚಾರ ಪ್ರಕರಣಗಳಿವೆ. ಹೀಗಾಗಿ ಭ್ರಷ್ಟರೆಲ್ಲಾ ಸೇರಿ ಲೂಟಿ ಹೊಡೆಯುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿ ನಮ ತಂಡದ ಸರ್ಕಾರ ರಚನೆಯಾಗಲಿದೆ. ಭ್ರಷ್ಟಾಚಾರ ರಹಿತವಾದ ಸರ್ಕಾರ ನೀಡುತ್ತೇವೆ. ಹಿಂದುತ್ವದ ರಕ್ಷಣೆ ಹಾಗೂ ಅಭಿವೃದ್ಧಿ ಪರ ಆಡಳಿತ ನಡೆಸುತ್ತೇವೆ ಎಂದು ಭರವಸೆ ನೀಡಿದರು. ಪೂಜ್ಯ ತಂದೆ ಮತ್ತು ಮಗ ಹೊರತು ಪಡಿಸಿ ಉಳಿದ ಎಲ್ಲಾ ಬಿಜೆಪಿ ನಾಯಕರೂ ನನ್ನ ಸಂಪರ್ಕದಲ್ಲಿದ್ದಾರೆ. ಯಡಿಯೂರಪ್ಪ ಅವರು ಅಮಿತ್ ಶಾ ಅವರ ಮುಂದೆ ಕುಳಿತು ಯತ್ನಾಳರನ್ನು ಉಚ್ಛಾಟನೆ ಮಾಡದೇ ಇದ್ದರೆ ನಾನು ಪಕ್ಷ ಬಿಟ್ಟು ಹೋಗುತ್ತೇನೆ ಎಂದು ಬ್ಲಾಕ್‌ಮೇಲ್ ಮಾಡಿದ್ದರು. ಅದಕ್ಕಾಗಿ ನನ್ನನ್ನು ಬಿಜೆಪಿಯಿಂದ ಉಚ್ಛಾಟಿಸಲಾಗಿದೆ. ಈ ಕ್ರಮ ತೆಗೆದುಕೊಂಡಿದ್ದು ತಪ್ಪಾಗಿದೆ ಎಂದು ಖುದ್ದು ಅಮಿತ್ ಶಾ ಅವರೇ ಪಶ್ಚಾತ್ತಾಪದ ಮಾತುಗಳನ್ನಾಡಿದ್ದಾರೆ ಎಂದು ತಿಳಿದು ಬಂದಿದೆ ಎಂದರು. ಪ್ರಧಾನ ಮಂತ್ರಿಯವರು ಭ್ರಷ್ಟಾಚಾರ ರಹಿತ ಹಾಗೂ ಕುಟುಂಬ ರಾಜಕಾರಣವನ್ನು ವಿರೋಧಿಸುತ್ತಾರೆ. ರಾಜ್ಯ ಬಿಜೆಪಿಯಲ್ಲಿ ಈ ಎರಡೂ ಇವೆ. ಮುಂದಿನ ದಿನಗಳಲ್ಲಿ ಇದು ಸರಿ ಹೋಗದೇ ಇದ್ದರೆ 2028ರ ವೇಳೆಗೆ ಹೊಸ ಪಕ್ಷ ಸ್ಥಾಪನೆ ಮಾಡಿ, ಚುನಾವಣೆ ಎದುರಿಸುತ್ತೇವೆ. ನಮ ಪಕ್ಷ ಅಧಿಕಾರಕ್ಕೆ ಬರಲಿದೆ ಎಂದು ಹೇಳಿದರು.

## 420 ಕೋಟಿ ರೂ.ವೆಚ್ಚದಲ್ಲಿ ಸೆ.22ರಿಂದ ಅ.7ರವರೆಗೆ ಮತ್ತೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ



ಬೆಂಗಳೂರು: ಬಹು ಚರ್ಚಿತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಇದೇ ತಿಂಗಳ 22ರಿಂದ ಅ.7ರವರೆಗೆ ಕೈಗೊಳ್ಳಲಾಗುತ್ತಿದ್ದು, ಪ್ರತಿಯೊಬ್ಬರೂ ತಪ್ಪದೇ ಸಮೀಕ್ಷೆಯಲ್ಲಿ ಭಾಗವಹಿಸಿ ಮಾಹಿತಿ ನೀಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮನವಿ ಮಾಡಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತಿ ಜನಗಣತಿ ಎಂದೇ ಪರಿಗಣಿಸಲಾಗುವ ಸಾಮಾಜಿ–ಕ ಹಾಗೂ ಶೈಕ್ಷಣಿಕ ಸಮೀಕ್ಷೆಯ ಸಮಗ್ರ ಮಾಹಿತಿ ನೀಡಿದರು.

ರಾಜ್ಯದಲ್ಲಿ 2 ಕೋಟಿ ಮನೆಗಳಿದ್ದು, 7 ಕೋಟಿ ಜನಸಂಖ್ಯೆ ಇದೆ. ಎಲ್ಲಾ ಮನೆಗಳ ಸಮೀಕ್ಷೆ ನಡೆಸಲು, ದಸರಾ ರಜೆಯ ಸಂದರ್ಭದಲ್ಲಿ 1.75 ಲಕ್ಷ ಶಿಕ್ಷಕರನ್ನು ಬಳಸಿಕೊಳ್ಳಲಾಗುತ್ತಿದೆ. ಪ್ರತಿ ಶಿಕ್ಷಕರಿಗೆ 120 ರಿಂದ 150 ಮನೆಗಳ ಸಮೀಕ್ಷೆಯ ಜವಾಬ್ದಾರಿಯನ್ನು ವಹಿಸಲಾಗಿದೆ ಎಂದರು.
ಶಿಕ್ಷಕರು, ಆಶಾ ಕಾರ್ಯಕರ್ತರ ಗೌರವ ಧನಕ್ಕಾಗಿಯೇ 375 ಕೋಟಿ ರೂ. ವೆಚ್ಚವಾಗಲಿದ್ದು, ಮೊದಲ ಹಂತದಲ್ಲಿ ರಾಜ್ಯ ಸರ್ಕಾರ 420 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ.
ಅಗತ್ಯವಾದರೆ ಮತ್ತಷ್ಟು ಅನುದಾನ ಒದಗಿಸಲಾಗುವುದು ಎಂದರು.

ಈ ಹಿಂದೆ ಕಾಂತರಾಜು ಆಯೋಗ ನಡೆಸಿದ್ದ 15 ದಿನಗಳ ಸಮೀಕ್ಷೆಗೆ 165 ಕೋಟಿ ರೂ. ಖರ್ಚಾಗಿತ್ತು. ಆ ವರದಿಗೆ 10 ವರ್ಷ ವಾಗಿದ್ದರಿಂದಾಗಿ ಅವಧಿ ಮೀರಿದೆ ಎಂದು ತಿರಸ್ಕರಿಸಲಾಗಿದೆ. ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ಪ್ರಸ್ತುತವಾಗಿ ನಡೆಸಲಾಗುತ್ತಿರುವ ಮರು ಸಮೀಕ್ಷೆಗೆ ವೈಜ್ಞಾನಿಕ ಪದ್ಧತಿಗಳನ್ನು ಅಳವಡಿಸಿಕೊಳ್ಳಲಾಗಿದೆ. ಡಿಸೆಂಬರ್ ವೇಳೆಗೆ ಸಮೀಕ್ಷಾ ವರದಿ ನೀಡುವಂತೆ ಸೂಚಿಸಲಾಗಿದೆ ಎಂದರು. ಪ್ರತಿ ಮನೆಗೂ ವಿದ್ಯುತ್ ಸಂಪರ್ಕದ ಜೊತೆ ಆರ್‌ಆರ್ ಸಂಖ್ಯೆಯನ್ನು ನೀಡಲಾಗಿರುತ್ತದೆ. ಜಿಯೋ ಟ್ಯಾಗ್ ಮಾಡಿ ಸಿದ್ದಪಡಿಸಲಾದ ಯೂನಿಕ್ ಹೌಸ್‌ವೊಲ್?ಡ ಐಡೆಂಟಿಟಿ (ಯುಎಚ್‌ಐಡಿ) ಪಟ್ಟಿಗಳನ್ನು (ಸ್ಟಿಕ್ಕರ್) ಮೀಟರ್ ರೀಡರ್‌ಗಳು ಆರ್‌ಆರ್ ಸಂಖ್ಯೆ ಆಧಾರಿತವಾಗಿ ಪ್ರತಿ ಮನೆಗೆ ಅಂಟಿಸಿರುತ್ತಾರೆ. ಆ ನಂತರ ಸಮೀಕ್ಷಾದಾರರು ಹೋಗುವ ಮೂರು ದಿನಗಳ ಮುಂಚಿತವಾಗಿ ಆಶಾ ಕಾರ್ಯಕರ್ತರು ಪ್ರತಿ ಮನೆಗೆ ಭೇಟಿ ನೀಡಿ, ಸಮೀಕ್ಷೆಯ ವೇಳೆ ಭರ್ತಿ ಮಾಡಿಕೊಳ್ಳುವ ಪ್ರಶ್ನಾವಳಿಗಳ ನಮೂನೆಯನ್ನು ನೀಡಿರುತ್ತಾರೆ.

ವಿದ್ಯಾವಂತರೂ ಆ ನಮೂನೆಗಳನ್ನು ಓದಿಕೊಂಡು ಸಮೀಕ್ಷದಾರರಿಗೆ ಉತ್ತರ ನೀಡಲು ಸಿದ್ಧವಾಗಲು ಇದರಿಂದ ಅನುಕೂಲವಾಗುತ್ತದೆ. ಸಮೀಕ್ಷೆಯಿಂದ ಯಾರೂ ತಪ್ಪಿಸಿಕೊಳ್ಳಬಾರದು ಎಂಬ ಕಾರಣಕ್ಕೆ ಈ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ ಎಂದರು.ಹಿಂದೆ ಕಾಂತರಾಜ್ ಆಯೋಗ 54 ಪ್ರಶ್ನೆಗಳನ್ನು ಕೇಳಿತ್ತು. ಪ್ರಸ್ತುತ ಸಮೀಕ್ಷೆಯಲ್ಲಿ 60 ಪ್ರಶ್ನೆಗಳನ್ನು ಕೇಳಲಾಗುತ್ತಿದೆ ಎಂದು ವಿವರಿಸಿದರು. ಸಮೀಕ್ಷೆಯಲ್ಲಿ ಜಾತಿಯನ್ನು ನಮೂದಿಸಲು ಮುಜುಗರ ಪಟ್ಟುಕೊಳ್ಳುವವರಿಗೆ ಪರ್ಯಾಯ ಮಾರ್ಗಗಳಿವೆ. ಆಯೋಗದ ವೆಬ್‌ಸೈಟ್‌ನಲ್ಲಿ ಮಾಹಿತಿ ನೀಡಬಹುದು ಅಥವಾ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ಸ್ಥಾಪಿಸಲಾಗಿರುವ ಸಹಾಯವಾಣಿ ಸಂಖ್ಯೆ 8050770004ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ತಿಳಿಸಿದರು.

ಮತಾಂತರಗೊಂಡಿರುವವರು ತಾವು ಅನುಸರಿಸುತ್ತಿರುವ ಧರ್ಮವನ್ನು ನಮೂದಿಸಬೇಕು. ಸಮೀಕ್ಷೆಯಲ್ಲಿ ಪ್ರಸ್ತುತ ಪಾಲಿಸುತ್ತಿರುವ ಧರ್ಮವನ್ನು ಮಾತ್ರ ಪರಿಗಣಿಸಲಾಗುತ್ತದೆ. ಜಾತಿ ಹೇಳಲು ಹಿಂಜ–ರಿಯುವವರಿಗೆ ಸಮಾಧಾನದಿಂದ ತಿಳುವಳಿಕೆ ಹೇಳಿ ಮಾಹಿತಿ ಪಡೆದುಕೊಳ್ಳಲು ಶಿಕ್ಷಕರಿಗೆ ಅಗತ್ಯ ತರಬೇತಿ ನೀಡಲಾಗುತ್ತದೆ. ಪ್ರತಿಯೊಂದು ಮನೆಯ ಆಧಾರ್ ಕಾರ್ಡ್, ಪಡಿತರ ಚೀಟಿಯನ್ನು ಮೊಬೈಲ್ ನಂಬರ್ ಜೊತೆ ಜೋಡಣೆ ಮಾಡಲಾಗುತ್ತದೆ. ಮೊಬೈಲ್ ನಂಬರ್ ಇಲ್ಲದೇ ಹೋದರೆ ಬೇರೆ ರೀತಿಯ ಕ್ರಮಗಳನ್ನು ಅನುಸರಿಸಲಾಗುವುದು. ಒಂದು ವೇಳೆ ಯುಎಚ್‌ಐಡಿ ನಂಬರ್ ಇಲ್ಲದೇ ಇದ್ದರೂ ಅಂತಹ ಮನೆಯನ್ನು ಗುರುತಿಸಿ ಸಮೀಕ್ಷೆ ನಡೆಸಲು ಶಿಕ್ಷಕ–ರಿಗೆ ಅವಕಾಶವಿದೆ. ಅದಕ್ಕಾಗಿ ಹೆಚ್ಚುವರಿ 100 ರೂ. ಗೌರವ ಧನ ನೀಡಲಾಗುವುದು ಎಂದು ತಿಳಿಸಿದರು. ಕೇಂದ್ರ ಸರ್ಕಾರವೂ ಜನಗಣತಿಯ ಜೊತೆ ಜಾತಿಗಣತಿ ನಡೆಸಲು ನಿರ್ಧರಿಸಿದೆ. ಒಂದು ವೇಳೆ ಜಾತಿ ಹೇಳಲು ಈಗ ಹಿಂದೇಟು ಹಾಕಿದರೆ ಕೇಂದ್ರ ಸರ್ಕಾರ ಸಮೀಕ್ಷೆ ನಡೆಸಿದಾಗಲಾದರೂ ಹೇಳಬೇಕಾಗುತ್ತದೆ. ಕೇಂದ್ರ ಸರ್ಕಾರ ಜನಗಣತಿ ನಡೆಸುತ್ತದೆಯೇ ಹೊರತು ಸಾಮಾಜಿಕ ಶೈಕ್ಷಣಿಕ ಮಾಹಿತಿಗಳನ್ನು ಕಲೆ ಹಾಕುವುದಿಲ್ಲ.

## ಕ್ರಿಮಿನಲ್‌ಗಳ ಜೊತೆ ಗುರುತಿಸಿಕೊಂಡರೆ ಕಠಿಣ ಕ್ರಮ :ಸೀಮಂತ್‌ಕುಮಾರ್ ಸಿಂಗ್ ಎಚ್ಚರಿಕೆ



ಬೆಂಗಳೂರು: ಕ್ರಿಮಿನಲ್‌ಗಳ ಜೊತೆ ಗುರುತಿಸಿಕೊಂಡರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಎಚ್ಚ–ರಿಸಿದ್ದಾರೆ. ಥಣಿಸಂದ್ರದ ಸಿಎಆರ್ ಕವಾಯತು ಮೈದಾನದಲ್ಲಿಂದು ಹಮಿಕೊಂಡಿದ್ದ ಮಾಸಿಕ ಪರೇಡ್‌ನಲ್ಲಿ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ಕ್ರಿಮಿನಲ್‌ಗಳ ಜೊತೆ ಸೇರಿಕೊಂಡರೆ ಸಮಾಜಕ್ಕೆ ತಪ್ಪು ಸಂದೇಶ ಹೋಗುತ್ತದೆ, ಯಾವ ಕಾರಣಕ್ಕೂ ಅಂತಹ ಸಿಬ್ಬಂದಿಯನ್ನು ಬಿಡುವುದಿಲ್ಲ, ಪೊಲೀಸ್ ಇಲಾಖೆಗೆ ಸೇರಿದ್ದೀರಿ, ಒಂದು ಟೀಂ ಆಗಿ ಉತ್ತಮವಾಗಿ ಕೆಲಸ ಮಾಡಬೇಕು ಎಂದು ಅವರು ಎಚ್ಚರಿಸಿದರು.

ಬಂದೋಬಸ್ತ್ ವೇಳೆ ಮೊದಲು ನಿಮನ್ನು ನೀವು ರಕ್ಷಣೆ ಮಾಡಿಕೊಂಡು ಹೆಲ್ಮೆಟ್, ಲಾಠಿ ಹಿಡಿದು ಕರ್ತವ್ಯದಲ್ಲಿ ತೊಡಗಿಕೊಂಡರೆ ಸಾರ್ವಜನಿಕರನ್ನು ರಕ್ಷಣೆ ಮಾಡಬಹುದು ಎಂದು ಸಿಬ್ಬಂದಿಗಳಿಗೆ ಸಲಹೆ ನೀಡಿದರು. ಇತ್ತೀಚೆಗೆ ಬಂದೋಬಸ್ತ್‌ನಲ್ಲಿ ಯಾರೂ ಕೂಡ ಹೆಲ್ಮೆಟ್ ಹಾಗೂ ಲಾಠಿ ತೆಗೆದುಕೊಂಡು ಹೋಗದಿರುವುದನ್ನು ಗಮನಿಸಿದ್ದೇನೆ. ಕಾಟಾಚಾರಕ್ಕೆ ನಿಂತರೆ ಆಗುವುದಿಲ್ಲ. ಪ್ರತಿ ಹಂತದಲ್ಲೂ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಅತಿಮುಖ್ಯ. ಅಧಿಕಾರಿಗಳು ಬಂದೋಬಸ್ತ್ ಕರ್ತವ್ಯಕ್ಕೆ ಹೋಗುವ ಸಿಬ್ಬಂದಿಯನ್ನು ತಪಾಸಣೆ ಮಾಡಿ ಕಳುಹಿಸಬೇಕು ಎಂದರು. ನೀವು ಕರ್ತವ್ಯಕ್ಕೆ ತೆರಳುವಾಗ ಸಮವಸ್ತ್ರ ಇದ್ದರೆ ಸಾಲುವುದಿಲ್ಲ, ಬಂದೋಬಸ್ತ್ ನೋಡಿಕೊಳ್ಳುವವರು ಆಯುಧಗಳ ಜೊತೆಗೆ ತೆರಳಬೇಕು. ನಗರಕ್ಕೆ ಕೆ–ಎಸ್‌ಆರ್‌ಪಿ ತುಕಡಿ ಬಂದಾಗಲೂ ಸಹ ಕಡ್ಡಾಯವಾಗಿ ಲಾಠಿ, ಹೆಲ್ಮೆಟ್ ಜೊತೆಯಲ್ಲಿರಬೇಕು ಎಂದು ಅವರು ಹೇಳಿದರು.

ಸರ್ಕಾರದ ಗೃಹ ಇಲಾಖೆಯಿಂದ ಪೊಲೀಸ್ ಇಲಾಖೆಗೆ ಸೌಲಭ್ಯಗಳು ಬರುತ್ತಿದ್ದು, ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಅದೇ ರೀತಿ ಸಮಾಜಕ್ಕೆ ಒಳ್ಳೆಯ ರೀತಿ ಸೇವೆ ಮಾಡಲು ನೀವು ಕಾರಣರಾಗಬೇಕು ಎಂದು ಅವರು ತಿಳಿಸಿದರು. ವೃತ್ತಿ ಆಧಾರಿತ ಹಾಗೂ ವೈಯಕ್ತಿಕ ಜೀವನ ಎರಡನ್ನೂ ನಿಭಾಯಿಸಬೇಕು. ಹಬ್ಬಗಳನ್ನು ಕುಟುಂಬದೊಂದಿಗೆ ಆಚರಿಸಿ, ಕರ್ತವ್ಯವಿದ್ದಾಗ ನಿಷ್ಠೆಯಿಂದ ಸೇವೆ ಸಲ್ಲಿಸಿ ಬೆಂಗಳೂರು ನಗರಕ್ಕೆ ಒಳ್ಳೆಯ ಹೆಸರು ಬರಲು ಕಾರಣರಾಗಬೇಕು ಎಂದು ಸಿಬ್ಬಂದಿಗಳಿಗೆ ಕರೆ ನೀಡಿದರು. ಪೊಲೀಸ್ ಸಿಬ್ಬಂದಿಗಳಿಗಾಗಿ ಆರೋಗ್ಯ ತಪಾಸಣೆಗಾಗಿ ಖುಷಿ ಅಭಿಯಾನ ಆರಂಭವಾಗಿದೆ. ಎಲ್ಲಾ ಸಿಬ್ಬಂದಿಯೂ ತಪಾಸಣೆ ಮಾಡಿಸಿಕೊಂಡು ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಕಾರ್ಯಕ್ರಮ ಯಶಸ್ವಿಯಾದರೆ ಮೂರು ತಿಂಗಳಿಗೊಮೆ ಈ ಅಭಿಯಾನವನ್ನು ಮಾಡಲಾಗುವುದು ಎಂದರು.

ಪ್ರತಿ ಶುಕ್ರವಾರ ಕಡ್ಡಾಯವಾಗಿ ಪರೇಡ್‌ನಲ್ಲಿ ಪಾಲ್ಗೊಳ್ಳಬೇಕು. ಪರೇಡ್ ಮಾಡುವುದರಿಂದ ಶಿಸ್ತು ಬರಲಿದೆ. ಪರೇಡ್ ಮೈದಾನಕ್ಕೆ ಬಂದ ತಕ್ಷಣ ತಾವು ತರಬೇತಿ ಸಮಯದಲ್ಲಿ ಕಲಿಸಿದ ಪಾಠವನ್ನು ನೆನಪಿಸಿಕೊಳ್ಳಬೇಕು. ಕಾನ್ಸ್ ಸ್ಟೇಬಲ್ ಮಟ್ಟದಿಂದ ಅಧಿಕಾರಿ ಮಟ್ಟದವರೆಗೂ ಪರೇಡ್‌ನಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು. ಪ್ರತಿ ಮಂಗಳವಾರ ಮತ್ತು ಶುಕ್ರವಾರ ಇಲಾಖೆಯ ನಿಯಮಾನುಸಾರ ಎಷ್ಟು ಸಿಬ್ಬಂದಿ ಇರುತ್ತಾರೊ, ಅಷ್ಟು ಮಂದಿಯೂ ವೆಪನ್ ಡ್ರಿಲ್, ಲಾಠಿ ಡ್ರಿಲ್ ಮಾಡಬೇಕು ಎಂದು ಅವರು ಸೂಚಿಸಿದರು. ಇದಕ್ಕೂ ಮೊದಲು ಉತ್ತಮವಾಗಿ ಪರೇಡ್ ಮಾಡಿದ ಕಾನ್?ಸಸೇಬಲ್ ಹಾಗೂ ಅಧಿಕಾರಿ ವರ್ಗವನ್ನು ಆಯುಕ್ತರು ಶ್ಲಾಘಿಸಿದರು.

ಡಿಜಿಟಲ್ ವಾರ್ತೆ

## ಕಾನೂನು ಮುಂದೆ ಎಲ್ಲರೂ ಸಮಾನರು ಸರ್ಕಾರಿ ಸೇವೆಯಲ್ಲಿರುವವರು ಪ್ರಾಮಾಣಿಕವಾಗಿ

# ಕೆಲಸ ಮಾಡಿ: ಉಪಲೋಕಾಯುಕ್ತ ಬಿ. ವೀರಪ್ಪ

ಬೆಂ.ಗ್ರಾ.ಜಿಲ್ಲೆ: ಸರ್ಕಾರಿ ಕೆಲಸ ಎಲ್ಲರಿಗೂ ಸಿಗುವುದಿಲ್ಲ, ಸಿಕ್ಕಂತ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಪ್ರಾಮಾಣಿಕವಾಗಿ ಕೆಲಸ ಮಾಡಿ ಎಂದು ಅಧಿಕಾರಿಗಳಿಗೆ ಉಪಲೋಕಾಯುಕ್ತರಾದ ನ್ಯಾ. ಬಿ ವೀರಪ್ಪ ಅವರು ಹೇಳಿದರು. ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ನಡೆದ ಲೋಕಾಯುಕ್ತ ಸಂಸ್ಥೆಯಲ್ಲಿ ಬಾಕಿ ಇರುವ ದೊಡ್ಡಬಳ್ಳಾಪುರ ತಾಲ್ಲೂಕಿನ ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ಸಭೆಯಲ್ಲಿ ಅವರು ಮಾತನಾಡಿದರು.

ಅಧಿಕಾರವನ್ನು ದುರುಪಯೋಗ ಪಡಿಸಿಕೊಳ್ಳದೆ ಪ್ರಾಮಾಣಿಕವಾಗಿ ಕಾನೂನು ಅಡಿಯಲ್ಲಿ ಕೆಲಸ ಮಾಡಿ. ಸರ್ಕಾರಿ ಕೆಲಸದಲ್ಲಿ ಇದ್ದವರು ತಪ್ಪು ಕೆಲಸ ಮಾಡಿ ಪಶ್ಚಾತ್ತಾಪ ಪಡುವುದಕ್ಕಿಂತ ಪ್ರಾಮಾಣಿಕವಾಗಿ ಕೆಲಸ ಮಾಡಿ ನೆಮ್ಮದಿ ಜೀವನ ನಡೆಸುವುದು ಮುಖ್ಯ ಎಂದರು. ಕೋರ್ಟ್ ನಲ್ಲಿ ಕೇಸ್ ನಡೆಯುತ್ತಿದ್ದರೆ ಅಥವಾ ಕೇಸ್ ದಾಖಲಿಸಿದ್ದರೆ ಲೋಕಾಯುಕ್ತದಲ್ಲಿ ಕೇಸ್




ದಾಖಲಿಸಲು ಸಾಧ್ಯವಿಲ್ಲ. ಸುಳ್ಳು ಕೇಸ್ ಗಳಿಂದ ನಿಜ ಕೇಸ್ಗಳು ವಿಳಂಬವಾಗುತ್ತಿವೆ. ಇದರಿಂದ ನಿಷ್ಠಾವಂತ ಅಧಿಕಾರಿಗಳು ಕೆಲಸ ಕಾರ್ಯಗಳಿಗೆ ತೊಂದರೆ ಆಗುತ್ತಿವೆ. ಸುಳ್ಳು ಕೇಸ್ ಹಾಕಿದವ–ರಿಗೆ ನಿರ್ದಾಕ್ಷಿಣ್ಯವಾಗಿ ಶಿಕ್ಷೆ ನೀಡಲಾಗುತ್ತದೆ. ಸುಳ್ಳು ಕೇಸ್ ಹಾಕಿದವರಿಗೆ ಆರು ತಿಂಗಳು ಮೂರು ವರ್ಷ ಅಥವಾ ಐದು ವರ್ಷದವರೆಗೆ ದಂಡ ವಿಧಿಸುವ ಸಾಧ್ಯತೆಗಳಿರುತ್ತದೆ ಎಂದರು. ಕಾನೂನು ಯಾರನ್ನು ಬಿಡುವುದಿಲ್ಲ ಕಾನೂನು ಎಲ್ಲರಿಗೂ ಒಂದೇ ಎಂದು ಹೇಳಿದರು.

ಸರ್ಕಾರಿ ಆಸ್ತಿಯನ್ನು ಸಬ್ ರಿಜಿಸ್ಟರ್ ಅಧಿಕಾರಿಗಳು ಬೇರೊಬ್ಬರಿಗೆ ಜಿಪಿಎ (ಜನರಲ್ ಪವರ್ ಆಫ್ ಅಟಾರ್ನಿ) ಅಥವಾ ರಿಜಿಸ್ಟರ್ ಮಾಡಿಕೊಟ್ಟಿರುವುದು ಇಂತಹ ಪ್ರಕರಣಗಳು ಹೆಚ್ಚಾಗಿ ಕಂಡುಬಂದಿದ್ದು ಸಂಬಂಧಪಟ್ಟ ತಹಶೀಲ್ದಾರ್ ಅವರು ದೊಡ್ಡಬಳ್ಳಾಪುರ ವ್ಯಾಪ್ತಿಯಲ್ಲಿ ಸರ್ಕಾರಿ ಆಸ್ತಿಯನ್ನು ಜಿಪಿಎ ಮಾಡಿರುವ ಆಸ್ತಿಯನ್ನು ಸರ್ವೇ ಮಾಡಿ ವರದಿ ನೀಡುವಂತೆ ಮತ್ತು ಅಧಿಕಾರಿ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದರು.

ಚಿಕ್ಕ ತುಮಕೂರು ಕೆರೆಗೆ ಕಾರ್ಖಾನೆಗಳಿಂದ ತ್ಯಾಜ್ಯ ಸುರಿಯುತ್ತಿರುವುದರ ಬಗ್ಗೆ ಕ್ರಮವಾಗಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪಿಡಿಒ ಕಾರ್ಖಾನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ನೀಡುವಂತೆ ತಿಳಿಸಿದರು.

ಮುರುಳಿ ಮೋಹನ್ ಅವರು ಬಾಶೆಟ್ಟಿಹಳ್ಳಿ ಸರ್ವೇ ನಂ 34/3 ಒಂದು ಎಕರೆ 3 ಕುಂಟೆ ಜಾಗದಲ್ಲಿ 5 ಅಂತಸ್ತಿನ ಕಟ್ಟಡ ನಿರ್ಮಾಣ ಮಾಡುತ್ತಿದ್ದು ಪಕ್ಕದಲಿ ಪೆಟ್ರೋಲ್ ಬಂಕ್ ಇದ್ದು ಮತ್ತು ಕಟ್ಟಡವು ರಸ್ತೆಯ ಪಕ್ಕಕ್ಕೆ ನಿರ್ಮಾಣಗೊಳ್ಳುತ್ತಿದೆ ಅದರಿಂದ ಸಾರ್ವಜನಿಕ–ರಿಗೆ ತೊಂದರೆಯಾಗುತ್ತದೆ ಎಂದು ಸಾರ್ವಜನಿಕ ಹಿತಾಸಕ್ತಿಯಿಂದ ಪ್ರಕರಣ ದಾಖಲಿಸಿದ್ದಾರೆ ಹಾಗಾಗಿ ಸಂಬಂಧಪಟ್ಟ ಮಾಲೀಕರು ಕಟ್ಟಡ ನಿರ್ಮಾಣಕ್ಕೆ ಅನುಮತಿ ಪಡೆದಿದ್ದಾರೇ ಎಂಬುದನ್ನು ಪರಿಶೀಲಿಸಿ ಸಾರ್ವಜನಿಕರಿಗೆ ತೊಂದರೆಯಾಗುವಂತೆ ಇದ್ದರೆ ಕಟ್ಟಡ ತೆರವುಗೊಳಿಸುವಂತೆ ಕ್ರಮ ವಹಿಸಿ ಎಂದರು.

ತಮಗೆ ಸಂಬಂಧವಿಲ್ಲದಿರುವ ಬೇರೆಯವರ ಪರ ಅರ್ಜಿ ಸಲ್ಲಿಸಿ ಪ್ರಕರಣ ದಾಖಲಿಸಿ ಬಂದಂತಹ ವ್ಯಕ್ತಿಗಳಿಗೆ ನೀವೇಕೆ ಬಂದಿದ್ದೀರಿ ಎಂದು ಪ್ರಶ್ನಿಸಿ, ನಿಮಗೆ ಏನಾದರೂ ಈ ಪ್ರಕ್ರಿಯೆ ನಡೆಸಲು ಅನುಮತಿ ಪತ್ರ ಕೊಟ್ಟಿದ್ದಾರೆ ತೋರಿಸಿ ಎಂದರು ಅನುಮತಿ ಪತ್ರ ನೀಡದವರನ್ನು ತರಾಟೆಗೆ ತೆಗೆದುಕೊಂಡು ಇದು ವೈಯಕ್ತಿಕ ವಿಚಾರ ಸಂಬಂಧಪಟ್ಟ ವ್ಯಕ್ತಿಯೇ ಕೇಸ್ ದಾಖಲಿಸಬೇಕು ಎಂದರು.

ಅಕ್ರಮ ಖಾತೆ ವರ್ಗಾವಣೆ, ಸುಳ್ಳು ದಾಖಲೆ ಸೃಷ್ಟಿಸಿ ಸರ್ಕಾರಿ ಭೂ ಒತ್ತುವರಿ, ಜಮೀನು ಸರ್ವೇ ಕಾರ್ಯ, ಸರ್ಕಾರಿ ರಸ್ತೆ, ಸ್ಮಶಾನ ಒತ್ತುವರಿ ಸೇರಿದಂತೆ ವಿವಿಧ ಪ್ರಕರಣಗಳ ವಿಚಾರಣೆ, ವಿಲೇವಾರಿ ನಡೆಸಲಾಯಿತು. ದೊಡ್ಡಬಳ್ಳಾಪುರದ ಕೆಲವು ಕೆರೆಗಳಿಗೆ ಕಸ ತಂದು ಸುರಿಯುತ್ತಿರುವುದು ಮಾಲಿನ್ಯ ಉಂಟಾಗಿ ಸುತ್ತ ಮುತ್ತಲಿನ ಹಳ್ಳಿಗಳಿಗೆ, ಕೆರೆಗೆ, ಪರಿಸರಕ್ಕೆ ಹಾನಿ ಉಂಟಾಗಿದೆ. ಯಾಕೆ ಇದುವರೆಗೆ ಕ್ರಮ ಆಗಿಲ್ಲ. ಇದರ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ಕಸ ಸುರಿಯುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

## ಬಿಐಟಿಎಂನಲ್ಲಿ "ಸ್ಮಾರ್ಟ್ ಮತ್ತು ಸುಸ್ಥಿರ ಕೃಷಿ"ಕುರಿತ ಒಂದು ವಾರದ ಅಟಲ್ ಫ್ಯಾಕಲ್ಟಿ ಅಭಿವೃದ್ಧಿ ಕಾರ್ಯಕ್ರಮ

ಬಳ್ಳಾರಿ: ಬಳ್ಳಾರಿ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್ಮೆಂಟ್ (ಬಿಐಟಿಎಂ) ಸೆಪ್ಟೆಂಬರ್ 15ರಿಂದ 20ರವರೆಗೆ "ಸ್ಮಾರ್ಟ್ ಮತ್ತು ಸುಸ್ಥಿರ ಕೃಷಿ: ಸಾಮಾಜಿಕ ಪರಿಣಾಮಕ್ಕಾಗಿ ಎಐ, ಐಓಟಿ ಮತ್ತು ಬಿಗ್ ಡೇಟಾವನ್ನು ಬಳಸಿಕೊಳ್ಳುವುದು" (``Smart and Sustainable Agriculture: Leveraging AI, IoT, and Big Data for Societal Impact") ಎಂಬ ವಿಷಯದಡಿ ಒಂದು ವಾರದ ಅಟಲ್ ಫ್ಯಾಕಲ್ಟಿ ಅಭಿವೃದ್ಧಿ ಕಾರ್ಯಕ್ರಮ (ATAL Faculty Development Program) ಆಯೋಜಿಸಿದೆ.

ಈ ಕಾರ್ಯಕ್ರಮವನ್ನು ಎಐಸಿಟಿಇಯ ಅಟಲ್ ಅಕಾಡೆಮಿ ಪ್ರಾಯೋಜಿಸಿದ್ದು, ಬಿಐಟಿಎಂನ ಕಂಪ್ಯೂಟರ್ ಸೈನ್ಸ್ (ಡೇಟಾ ಸೈನ್ಸ್) ವಿಭಾಗವು ನಡೆಸಲಿದೆ. ದೇಶದ ಪ್ರತಿಷ್ಠಿತ ಐಐಟಿ, ಎನ್‌ಐಟಿ ಹಾಗೂ ಕೈಗಾರಿಕಾ ತಜ್ಞರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ, ಕೃಷಿ ಕ್ಷೇತ್ರದಲ್ಲಿ ತಂತ್ರಜ್ಞಾನ




ಬಳಕೆ, ಸುಸ್ಥಿರತೆ ಮತ್ತು ಸಾಮಾಜಿಕ ಪರಿಣಾಮಗಳ ಕುರಿತು ವಿಶ್ಲೇಷಣೆ ಹಾಗೂ ಚರ್ಚೆ ನಡೆಸಲಿದ್ದಾರೆ. "ಪ್ರಾಧ್ಯಾಪಕ–ರಿಗೆ ನವೀಕೃತ ಜ್ಞಾನವನ್ನು ನೀಡುವತ್ತ ಈ ಕಾರ್ಯಕ್ರಮ ಮಹತ್ವದ ಹೆಜ್ಜೆಯಾಗಲಿದೆ" ಎಂದು ಕಾಲೇಜಿನ ಪ್ರಾಚಾರ್ಯರು ಡಾ. ಯಡವಳ್ಳಿ ಬಸವರಾಜ್ ತಿಳಿಸಿದ್ದಾರೆ.

ಕಾರ್ಯಕ್ರಮಕ್ಕೆ ಸಂಸ್ಥೆಯ ನಿರ್ದೇಶಕ ಶ್ರೀ ವೈ. ಜೆ. ಪೃಥ್ವಿರಾಜ ಭೂಪಾಲ್ ಹಾಗೂ ಅಧ್ಯಕ್ಷ ಡಾ. ಯಶವಂತ್ ಭೂಪಾಲ್ ಅವರ ಸಂಪೂರ್ಣ ಬೆಂಬಲ ಲಭಿಸಿದೆ. ಕಾರ್ಯಕ್ರಮದ ಮಾರ್ಗದರ್ಶನವನ್ನು ವಿಭಾಗ ಮುಖ್ಯಸ್ಥೆ ಡಾ. ಆರಾಧನಾ ಡಿ (ಸಿಎಸ್‌ಇ ? ಡೇಟಾ ಸೈನ್ಸ್), ಡೀನ್ ಡಾ.ಆರ್.ಎನ್.ಕುಲಕರ್ಣಿ (ಕಂಪ್ಯೂಟರ್ ಸೈನ್ಸ್) ಹಾಗೂ ಉಪ ಪ್ರಾಚಾರ್ಯರು ಡಾ. ಬಿ. ಎಸ್. ಖೇಣೆದ್ ಒದಗಿಸುತ್ತಿದ್ದಾರೆ. ಸಂಯೋಜಕರಾಗಿ ಡಾ. ಜಗದೀಶ್ ಆರ್. ಎಮ್., ಸಹ ಸಂಯೋಜಕರಾಗಿ ಡಾ. ರೇಣುಕಾ ಸಾಗರ್ ಮತ್ತು ಅಝುರ್ ಬೈಗ್ ಎಂ ಕಾರ್ಯನಿರ್ವಹಿಸುತ್ತಿದ್ದು, ಮಂಜುನಾಥ್ ಕೆ ಕೋರ್ಸ್ ಕಾರ್ಯದರ್ಶಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ.

## ಬನಹಳ್ಳಿ ಗ್ರಾಮ ಪಂಚಾಯ್ತಿ ಪಾರದರ್ಶಕವಾಗಿದೆ ಅಭಿವೃದ್ಧಿಯತ್ತ ಸಾಗುತ್ತಿದೆ ಗ್ರಾ.ಪಂ.ಅಧ್ಯಕ್ಷ ಬಿ.ಎಸ್.ಮಂಜುನಾಥ

ಮಾಲೂರು: ತಾಲೂಕಿನ ಬನಹಳ್ಳಿ ಗ್ರಾಮ ಪಂಚಾಯ್ತಿಯಲ್ಲಿ ಎಲ್ಲವು ಪಾರದರ್ಶಕವಾಗಿದೆ, ಯಾವುದೇ ಕಾಮಗಾರಿಗಳು ಕಳಪೆಯಾಗಿಲ್ಲ ಎಲ್ಲವು ಉತ್ತಮ ಗುಣಮಟ್ಟದಿಂದ ನಡೆದಿದೆ. ಹಣಕಾಸಿನ ವ್ಯವಹಾರದಲ್ಲೂ ಸಹ ಯಾವುದೇ ಲೋಪದೋಷಗಳು ಕಂಡು ಬಂದಿಲ್ಲವೆಂದು ಟೇಕಲ್‌ನ ಬನಹಳ್ಳಿ ಗ್ರಾ.ಪಂ.ಅಧ್ಯಕ್ಷ ಬಿ.ಎಸ್.ಮಂಜುನಾಥ ತಿಳಿಸಿದರು. ಅವರು ಬನಹಳ್ಳಿ ಗ್ರಾ.ಪಂ.ನ 2024–25ನೇ ಸಾಲಿನ ಜಮಾಬಂಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಜ್ಯೋತಿ ಬೆಳಗಿಸಿ ಚಾಲನೆ ನೀಡಿ ಮಾತನಾಡುತ್ತಿದ್ದರು.

ಈ ಪಂಚಾಯ್ತಿಯಲ್ಲಿ ಒಂದು ಕೋಟಿ ರೂಪಾಯಿಗಳಿಗೂ ಹೆಚ್ಚು ನರೇಗಾ ಮತ್ತು ಇತರೆ ಕಾಮಗಾರಿಗಳು ನಡೆದಿದೆ. 84 ಲಕ್ಷ ರೂಗಳು ಕಾಮಗಾರಿಗೆ ಖರ್ಚು ಮಾಡಲಾಗಿದೆ. ಉಳಿಕೆ ಹಣ ಪಂಚಾಯ್ತಿ ಖಾತೆಯಲ್ಲಿದೆ ಎಂದರು. ಈ ಪಂಚಾಯ್ತಿ ವ್ಯಾಪ್ತಿಯ 10 ಹಳ್ಳಿಗಳಲ್ಲಿ ಪಂಚಾಯ್ತಿಯಿಂದ ನಡೆಯಬಹುದಾದ ಎಲ್ಲಾ ಸೌಲಭ್ಯಗಳನ್ನು ಸಾರ್ವಜನಿಕರಿಗೆ ಒದಗಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗುವುದು.
ಜಮಾಬಂದಿ ಕಾರ್ಯಕ್ರಮದ ನೋಡೆಲ್ ಅಧಿಕಾರಿ ಹಾಗೂ ತಾಲ್ಲೂಕು ಮೀನುಗಾರಿಕೆ ಸಹಾಯಕ



ನಿರ್ದೇಶಕರು ಪೆದ್ದಣ್ಣರವರು ಮಾತನಾಡಿ ಬನಹಳ್ಳಿ ಪಂಚಾಯ್ತಿಯಲ್ಲಿ ಕೈಗೊಂಡಿರುವ ಕಾಮಗಾ–ರಿಗಳ ಜಮಾ ಖರ್ಚಿನ ಬಗ್ಗೆ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ವರದಿ ಮಂಡಿಸಿದ್ದು ಅದನ್ನು ಕೂಲಂಕುಶವಾಗಿ ಪರಿಶೀಲನೆ ನಡೆಸಿದ್ದು, ಕೈಗೊಂಡಿರುವ ಕಾಮಗಾರಿಗಳನ್ನು ಸಹ ವೀಕ್ಷಿಸಿ ಸಂಬಂದಪಟ್ಟ ಇಲಾಖೆಗೆ ಮಂಜೂರಾತಿಗಾಗಿ ಕಡತವನ್ನು ರವಾನಿಸಲಾಗುತ್ತದೆ. ಈ ಬಗ್ಗೆ ಸಾರ್ವಜನಿಕರು ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ನಮ್ಮ ಗಮನಕ್ಕೆ ತಂದರೆ ಅದರ ಬಗ್ಗೆ ಪರಿಶೀಲನೆ ನಡೆಸಲಾಗುತ್ತದೆ ಎಂದರು.
ಕಾರ್ಯಕ್ರಮದಲ್ಲಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಜವರೇಗೌಡ.ಎ.ಹೆಚ್, ಪಂಚಾಯ್ತಿ ಉಪಾಧ್ಯಕ್ಷರು ಮಂಜುಳ ಮಂಜುನಾಥ, ಕಾರ್ಯದರ್ಶಿ ಮಲ್ಲಿಕಾರ್ಜುನಯ್ಯ, ಹಾಗೂ ಗ್ರಾ.ಪಂ.ಸದಸ್ಯರುಗಳು, ಸಿಬ್ಬಂದಿ ವರ್ಗ, ಸಾರ್ವಜನಿಕರು ಹಾಜರಿದ್ದರು.

## ನೃತ್ಯ ಕಲಾವಿದೆ ವಿದುಷಿ ಶ್ರೀಮತಿ ಎಲ್.ಎಸ್. ವಾಸವಿ ಅವರಿಗೆ ಕಮಲಾಂಜಲಿ ಪ್ರಶಸ್ತಿ ಪ್ರದಾನ

ಬೆಂಗಳೂರು: AVO-PA Charitable Trust ಮತ್ತು ಸಂಘದವರು Teacher's Day ಸಂಬಂಧವಾಗಿ BMS ಕಾನೂನು ಕಾಲೇಜಿನ ಸಹ ಪ್ರಾಧ್ಯಪಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಶಾಸ್ತ್ರೀಯ ನೃತ್ಯ ಭರತನಾಟ್ಯ ಪ್ರವೀಣೆ ವಿದೂಷಿ ಶ್ರೀಮತಿ L. S. ವಾಸವಿ ಅವರಿಗೆ ಶ್ರೀಮತಿ ಕಮಲಾಂಜಿನಿ ಅವಾರ್ಡ್ ಅನ್ನು ಪ್ರದಾನ ಮಾಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ವಿದುಷಿ ಶ್ರೀಮತಿ ವಾಸವಿ ಅವರಿಂದ "ನೃತ್ಯ ವೈಭವ" ಭರತನಾಟ್ಯವನ್ನು ಪ್ರದರ್ಶಿಸಲಾಯಿತು. ಈ ಕಾರ್ಯಕ್ರಮವನ್ನು ಬೆಂಗಳೂ–ರಿನ ಬಸವನಗುಡಿಯಲ್ಲಿರುವ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ನಲ್ಲಿ ಆಯೋಜಿಸಲಾಗಿತ್ತು. ವಿದುಷಿ ಎಲ್. ಎಸ್. ವಾಸವಿ ಅವರನ್ನು "ಒಂದೇ ನಾಣ್ಯದ ಎರಡು ಮುಖಗಳಿರುವ" ರೀತಿ ಅವರ ಉತ್ತಮ ಮತ್ತು ದಕ್ಷ ಬೋಧನೆ ಹಾಗೂ ಶಾಸ್ತ್ರೀಯ ನೃತ್ಯ ಕ್ಷೇತ್ರದಲ್ಲಿ ಸಲ್ಲಿಸಿರುವ ವಿಶೇಷ ಸೇವೆಯನ್ನು ಗುರುತಿಸಿ "ಶ್ರೀಮತಿ ಕಾಮಲಾಂಜಿನಿ ಪ್ರಶಸ್ತಿ* ನೀಡಿ




ಗೌರವಿಸಿರುವ ಬಗ್ಗೆ ಅವೋಪ ಅಧ್ಯಕ್ಷರು ಶ್ಲಾಘಿಸಿದರು.


"ನೃತ್ಯ ವೈಭವ" ಎಂಬ ಕಾರ್ಯಕ್ರಮದಲ್ಲಿ ವಾಸವಿ ಅವರು ನೃತ್ಯ ಪ್ರದರ್ಶನವನ್ನು ಅಮೋಘವಾಗಿ ಪ್ರದರ್ಶಿಸಿದರು. ಅವರ ಕಲಾಪ್ರಿಯತೆ ಹಾಗೂ ಶಾಸ್ತ್ರೀಯ ನೃತ್ಯವನ್ನು ಉತ್ತೇಜಿಸುವ ಕಾರ್ಯವನ್ನು ಅಭಿಮಾನಿಗಳ ಮುಂದಿಡಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಕರ್ನಾಟಕ ಆರ್ಯ ವೈಶ್ಯ ಮಹಾಸಭಾದ ಅಧ್ಯಕ್ಷರಾದ ಶ್ರೀ ಆರ್. ಪಿ. ರವಿಶಂಕರ್ ಮಾತನಾಡುತ್ತಾ, ೦ಗಿಔ೦ ಅವರು ನಿಜವಾಗಿಯೂ ಈ ಪ್ರಶಸ್ತಿಗೆ ಭಾಜನವಾಗಿರುವ ಶ್ರೀಮತಿ ವಾಸವಿಯವರ ಉತ್ತಮ ಭೋಧನೆ ಮತ್ತು ಕಲಾ ಪ್ರತಿಭೆಗೆ ಆಯ್ಕೆ ಮಾಡಿರುವುದು ಶ್ಲಾಘನೀಯವಾಗಿದೆಯೆಂದು ತಿಳಿಸಿ ಸಂತೋಷ ವ್ಯಕ್ತಪಡಿಸಿದರು.

ಈ ಗೌರವಯುಕ್ತ ಸಮಾರಂಭವು ವಿದೂಷಿ ವಾಸವಿ ಅವರ ಭೋಧನಾ ಪ್ರತಿಭೆ ಕಲಾ ವೃದ್ಧಿಗೆ ನೀಡಿದ ಸೇವೆ ಹಾಗೂ ಸಾಂಸ್ಕೃತಿ–ಕ ಪರಂಪರೆಯನ್ನು ಉಳಿಸಿ ಬೆಳೆಸುವ ಅವರ ಕಾರ್ಯವನ್ನು ಸ್ಮರಿಸುವಂತೆ ನಡೆಯಿತು. ಗಣ್ಯರು ಮತ್ತು ಕಲಾ ಪ್ರಿಯರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

## ಸುಲಿಗೆ ಮಾಡಿದ್ದ ಉಬರ್ ಕ್ಯಾಬ್ ಡ್ರೈವರ್ ಬಂಧಿಸಿದ ತಿರುಮಲಶೆಟ್ಟಿಹಳ್ಳಿ ಪೊಲೀಸರು

ಹೊಸಕೋಟೆ: ಚಿತ್ತೂರಿನ ನಿರ್ಮಲ ಎಂಬುವರು ಚಿತ್ತೂರಿನಿಂದ ಬಂದು ಹೊಸಕೋಟೆಯಲ್ಲಿ ಇಳಿದು. ಗುಂಜೂರಿಗೆ ಹೋಗಲು ಉಬರ್ ಕ್ಯಾಬ್ ಅನ್ನು ಬುಕ್ ಮಾಡಿಕೊಂಡು ಹೋಗುತ್ತಿದ್ದಾಗ, ಕ್ಯಾಬ್ ಚಾಲಕ ಮಹಮದ್ ಸಿದ್ದಿಕಿ ಎಂಬುವನು ಹೊಸಕೋಟೆ ತಾಲ್ಲೂಕಿನ ಗಣಗಲೂರು ಮುಖಾಂತರ ಸಾರ್ಟ್‌ಕಟ್ ರೂಟ್‌ನಲ್ಲಿ ಹೋಗುತ್ತೇನೆಂತಾ ಅವರಿಗೆ ನಂಬಿಸಿ ಅವರನ್ನು ನಿರ್ಜನ ಪ್ರದೇಶಕ್ಕೆ ಕರೆದುಕೊಂಡು ಹೋಗಿ ಮುಖಕ್ಕೆ ಸ್ಪ್ರೇ ಹೊಡೆದು.

ಪ್ರಜ್ಞೆ ತಪ್ಪಿಸಿ, ಅವರ ಕತ್ತಿನಲ್ಲಿದ್ದ 60 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರವನ್ನು ಕಿತ್ತುಕೊಂಡು ಹೋಗಿರುತ್ತಾನೆ. ಈ ಬಗ್ಗೆ ತಿರುಮಲಶೆಟ್ಟಿಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು. ಕೂಡಲೇ ಹೊಸಕೋಟೆ ಉಪವಿಭಾಗದ ಡಿವೈಎಸ್ ಪಿ ಶ್ರೀ ಮಲ್ಲೇಶ್ ರವರ ನೇತೃತ್ವದಲ್ಲಿ ತಿರುಮಲಶೆಟ್ಟಿಹಳ್ಳಿ ಪೊಲೀಸ್ ಇನ್ಸಪೇಕ್ಟರ್ ಸುಂದರ್ ಹಾಗೂ ಪಿ.ಎಸ್.ಐ ನಾರಾಯಣಸ್ವಾಮಿ, ಸಿಬ್ಬಂದಿಗಳಾದ ನಟ–ರಾಜ್, ಲಕ್ಷ್ಮೀಕಾಂತ, ಅಕ್ಷಯ, ಅಂಬರೀಶ, ನರಸಿಂಹಯ್ಯ, ದತ್ತಾತ್ರೇಯ ಹಾಗೂ ಇತರರು ಕಾರ್ಯಚರಣೆ ಕೈಗೊಂಡು. ಕ್ಷಣಾರ್ಧದಲ್ಲೇ ಆರೋಪಿಯಾದ ಮಹಮದ್ ಸಿದ್ದಿಕಿ, ಎಂ. ಎಸ್ ಪಾಳ್ಯ ಆರೋಪಿಯನ್ನು ಬಂಧಿಸಿ, ಆರೋಪಿಯಿಂದ 06 ಲಕ್ಷ ಮೌಲ್ಯದ 60 ಗ್ರಾಂ ಚಿನ್ನದ ಮಾಂಗಲ್ಯ ಸರವನ್ನು ವಶಪಡಿಸಿಕೊಂಡಿರುತ್ತಾರೆ. ಈ ಕಾರ್ಯಚರಣೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪೊಲೀಸ್ ಅಧೀಕ್ಷಕರಾದ ಸಿ.ಕೆ ಬಾಬ ರವರು ಮತ್ತು ಅಪರ ಪೊಲೀಸ್ ಅಧೀಕ್ಷಕರಾದ ಹೆಚ್.ಎನ್ ವೆಂಕಟೇಶಪ್ರಸನ್ನ ಮತ್ತು ಕೆ.ಎಸ್ ನಾಗರಾಜ ರವರು ತಂಡಕ್ಕೆ ಅಭಿನಂದಿಸಿರುತ್ತಾರೆ.



Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.